## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 96 |
| ಸದಸ್ಯರ ಹೆಸರು | ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 13.02.2024 |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು. |

| ಕ್ರ. ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ರಾಜ್ಯದಲ್ಲಿ ಅಕ್ರಮ ಮರಳು ದಂಧೆಗೆ ಕಡಿವಾಣ ಹಾಕಲು ಸರ್ಕಾರ ಕೈಗೊಂಡ ಕ್ರಮಗಳೇನು; | • ಅನಧಿಕೃತ ಮರಳು ಗಣಿಗಾರಿಕೆ, ದಾಸ್ತಾನು, ಸಾಗಾಣಿಕೆ ಯನ್ನು ತಡೆಗಟ್ಟಲು ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮರಳು ಸಮಿತಿ ಹಾಗೂ ಉಪವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮರಳು ಸಮಿತಿಯನ್ನು ರಚಿಸಲಾಗಿರುತ್ತದೆ.<br>• ಮೇಲ್ಕಂಡ ಸಮಿತಿಯಲ್ಲಿ ಕಂದಾಯ, ಪೊಲೀಸ್, ಅರಣ್ಯ, ಲೋಕೋಪಯೋಗಿ, ಜಿಲ್ಲಾ ಪಂಚಾಯತ್, ಗಣಿ ಮತ್ತು ಭೂವಿಜ್ಞಾನ ಹಾಗೂ ಪ್ರಾದೇಶಿಕ ಸಾರಿಗೆ ಇಲಾಖೆ ಅಧಿಕಾರಿಗಳು ಸದಸ್ಯರುಗಳಾಗಿರುತ್ತಾರೆ.<br>• ಸದರಿ ಇಲಾಖೆಗಳ ಅಧಿಕಾರಿಗಳಿಗೆ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ತಡೆಯಲು ಗಣಿ ಮತ್ತು ಖನಿಜ (ಅಭಿವೃದ್ಧಿ ಮತ್ತು ನಿಯಂತ್ರಣ) ಕಾಯ್ದೆ, 1957ರ ಕಲಂ 4(1), 4(1-A) ಮತ್ತು ಕಲಂ 21 ಮತ್ತು 22 ರಡಿ ಹಾಗೂ ಕರ್ನಾಟಕ ಉಪ ಖನಿಜ ರಿಯಾಯಿತಿ ನಿಯಮಗಳು, 1994 ರ ನಿಯಮ 31-R(12) ರಡಿ ಸಂಬಂಧಪಟ್ಟ ಪೊಲೀಸ್ ಠಾಣೆಗಳಲ್ಲಿ ಹಾಗೂ ನ್ಯಾಯಾಲಯಗಳಲ್ಲಿ ಮೊಕದ್ದಮೆ ದಾಖಲಿಸಲು ಅಧಿಕಾರ ಪ್ರತ್ಯಾಯೋಜಿಸಲಾಗಿರುತ್ತದೆ.<br>• ಮುಂದುವರೆದು, ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994 ರ ನಿಯಮ 43-A ರಂತೆ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳಿಗೆ ದಂಡ ವಿಧಿಸಿ ವಸೂಲು ಮಾಡಲು ಅವಕಾಶ ಕಲ್ಪಿಸಲಾಗಿರುತ್ತದೆ.<br>• ಆಯಾ ಜಿಲ್ಲಾ ವ್ಯಾಪ್ತಿಯಲ್ಲಿ ಜಿಲ್ಲಾ ಹಾಗೂ ಮರಳು ಸಮಿತಿಯಿಂದ ಚಾಲಿತದಳ ತಂಡವನ್ನು ರಚಿಸಿಕೊಂಡು ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ವಹಿಸಲಾಗುತ್ತಿದೆ.<br>• ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು “ಖನಿಜ ಸಂರಕ್ಷಣಾ ಪಡೆ” ಯನ್ನು ಸ್ಥಾಪಿಸಲು ಕ್ರಮ ವಹಿಸಲಾಗುತ್ತಿದೆ. |

| | | |
|---|---|---|
| | | • ಮೇಲ್ಕಂಡಂತೆ ರಾಜ್ಯದಲ್ಲಿ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ನಡೆಸುತ್ತಿರುವವರ ವಿರುದ್ಧ ಕ್ರಮ ವಹಿಸಲಾಗಿದ್ದು, ಕಳೆದ ಮೂರು ವರ್ಷಗಳಲ್ಲಿ ಆಯಾ ಜಿಲ್ಲಾ ಮರಳು ಸಮಿತಿಯಿಂದ ಅನಧಿಕೃತ ಮರಳು ಗಣಿಗಾರಿಕೆಯಡಿ ಕೈಗೊಂಡ ಕ್ರಮದ ವಿವರಗಳನ್ನು **ಅನುಬಂಧ**ದಲ್ಲಿ ನೀಡಲಾಗಿದೆ. |
| ಆ) | ಅಕ್ರಮ ಮರಳು ದಂಧೆಯಿಂದ ರಾಜ್ಯದ ನದಿ ತೀರಗಳು ಹಾಗೂ ಅರಣ್ಯ ಪ್ರದೇಶ ಬರಡು ಭೂಮಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ನದಿ ಹಾಗೂ ಅರಣ್ಯ ರಕ್ಷಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು; | • ಅರಣ್ಯ ಪ್ರದೇಶಗಳ ವ್ಯಾಪ್ತಿಯಲ್ಲಿರುವ ನದಿಪಾತ್ರಗಳಲ್ಲಿ ಮರಳು ಗಣಿಗಾರಿಕೆಗೆ ಅವಕಾಶ ಕಲ್ಪಿಸಿರುವುದಿಲ್ಲ.<br>• ರಾಜ್ಯದಲ್ಲಿ ನದಿಪಾತ್ರದಲ್ಲಿ ಮರಳು ಬ್ಲಾಕ್ ಗಳನ್ನು ಜಿಲ್ಲಾ ಹಾಗೂ ತಾಲ್ಲೂಕು ಮರಳು ಸಮಿತಿಯಿಂದ ಗುರುತಿಸಿ, ಸದರಿ ಗುತ್ತಿಗೆ /ಕಾರ್ಯಾದೇಶವನ್ನು ಮಂಜೂರು ಮಾಡುವ ಪೂರ್ವದಲ್ಲಿ ನಿಯಮಾನುಸಾರ ಪರಿಸರ ಅನುಮತಿ ಪತ್ರ ಪಡೆದು ಗುತ್ತಿಗೆಗಳ ಕಾರ್ಯದೇಶವನ್ನು ಮಂಜೂರು ಮಾಡಲಾಗುತ್ತಿದೆ.<br>• ಮುಂದುವರೆದು, ರಾಜ್ಯದಲ್ಲಿ ಅಕ್ರಮ ಮರಳು ಗಣಿಗಾರಿಕೆ ತಡೆಗಟ್ಟಲು ಆಯಾ ಜಿಲ್ಲಾ ಮರಳು ಸಮಿತಿಗಳಿಂದ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತಿದ್ದು, ಕಳೆದ ಮೂರು ವರ್ಷಗಳಲ್ಲಿ ಆಯಾ ಜಿಲ್ಲಾ ಮರಳು ಸಮಿತಿಯಿಂದ ಅನಧಿಕೃತ ಮರಳು ಗಣಿಗಾರಿಕೆಯಡಿ ಕೈಗೊಂಡ ಕ್ರಮದ ವಿವರಗಳನ್ನು **ಅನುಬಂಧ**ದಲ್ಲಿ ನೀಡಲಾಗಿದೆ. |
| ಇ) | ಅಕ್ರಮ ಮರಳು ದಂಧೆಯಿಂದ ರಾಜ್ಯ ಸರ್ಕಾರಕ್ಕೆ ದೊಡ್ಡ ಮೊತ್ತದ ಆದಾಯ ನಷ್ಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಕುರಿತು ಸರ್ಕಾರದ ನಿಲುವೇನು ? | ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳಿಂದ ಬೊಕ್ಕಸಕ್ಕೆ ನಷ್ಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br>ಉಪ ಪ್ರಶ್ನೆ (ಆ) ರಲ್ಲಿ ತಿಳಿಸಿರುವಂತೆ, ರಾಜ್ಯದಲ್ಲಿ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ತಡೆಗಟ್ಟಲು ಆಯಾ ಜಿಲ್ಲಾ ಮರಳು ಸಮಿತಿಗಳಿಂದ ನಿಯಮಾನುಸಾರ ಕಟ್ಟುನಿಟ್ಟಿನ ಕ್ರಮ ಜರುಗಿಸಲು ಕ್ರಮ ವಹಿಸಲಾಗಿರುತ್ತದೆ. |

ಸಂಖ್ಯೆಸಿಐ -ಎಂಎಂಎನ್/43/2024

**(ಎಸ್.ಎಸ್.ಮಲ್ಲಿಕಾರ್ಜುನ)**
ಗಣಿ ಮತ್ತು ಭೂ ವಿಜ್ಞಾನ ಹಾಗೂ
ತೋಟಗಾರಿಕೆ ಸಚಿವರು.

ಅನುಬಂಧ

| ವರ್ಷ | ಅನಧಿಕೃತ ಮರಳು ಗಣಿಗಾರಿಕೆ | | | ಅನಧಿಕೃತ ಮರಳು ಸಾಗಾಣಿಕೆ | | | ಅನಧಿಕೃತ ಮರಳು ದಾಸ್ತಾನು | | |
|---|---|---|---|---|---|---|---|---|---|
| | ಪತ್ತೆ ಹಚ್ಚಿದ ಪ್ರಕರಣಗಳು | ವಿಧಿಸಿರುವ ದಂಡ (ರೂ.ಲಕ್ಷಗಳಲ್ಲಿ) | ದಾಖಲಿಸಿದ ಮೊಕದ್ದಮೆಗಳು | ಪತ್ತೆ ಹಚ್ಚಿದ ಪ್ರಕರಣಗಳು | ವಿಧಿಸಿರುವ ದಂಡ (ರೂ.ಲಕ್ಷಗಳಲ್ಲಿ) | ದಾಖಲಿಸಿದ ಮೊಕದ್ದಮೆ ಗಳು | ಪತ್ತೆ ಹಚ್ಚಿದ ಪ್ರಕರಣಗ ಳು | ವಿಧಿಸಿರುವ ದಂಡ (ರೂ.ಲಕ್ಷಗಳಲ್ಲಿ) | ದಾಖಲಿಸಿದ ಮೊಕದ್ದಮೆ ಗಳು |
| 2020-21 | 293 | 82.55 | 72 | 2866 | 506.41 | 929 | 288 | 136.35 | 127 |
| 2021-22 | 326 | 113.93 | 84 | 2949 | 608.74 | 971 | 261 | 183.58 | 134 |
| 2022-23 | 239 | 92.43 | 63 | 2864 | 623.86 | 741 | 303 | 82.12 | 160 |
| ಒಟ್ಟು | 858 | 288.91 | 219 | 8679 | 1739.01 | 2641 | 852 | 402.05 | 421 |

CI-MMN-43-43-2024.

Deputy Director (Min. Admn)
Dept. of Mines & Geology
Bangalore-560001